**ಕರ್ನಾಟಕ ಸರ್ಕಾರ**

ಸಂಖ್ಯೆ: ಅಪಜೀ 62 ಎಫ್ ಎಪಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:12.05.2021.

**ರವರಿಂದ,**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ,
ಬಹುಮಹಡಿ ಕಟ್ಟಡ, ಬೆಂಗಳೂರು.

**ರವರಿಗೆ,**
ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯಪಡೆ ಮುಖ್ಯಸ್ಥರು),
ಅರಣ್ಯ ಭವನ, ಮಲ್ಲೇಶ್ವರಂ,
ಬೆಂಗಳೂರು.

ಮಾನ್ಯರೆ,

ವಿಷಯ: ಅರಣ್ಯ ಇಲಾಖೆಯ ಮಾಹಿತಿ ಸಂವಹನ ತಂತ್ರಜ್ಞಾನ ಘಟಕದಲ್ಲಿ ಕಾರ್ಯನಿರ್ವಹಿಸಲು ಅಗತ್ಯವಿರುವ ಐಟಿ ಕನ್ಸಲ್ಟೆಂಟ್ಸ್ (IT Consultants) (ತಾಂತ್ರಿಕ ಸಮಾಲೋಚಕರು) ಗಳನ್ನು ಒಂದು ವರ್ಷದ ಅವಧಿಗೆ ನೇಮಿಸಿಕೊಳ್ಳಲು ಸರ್ಕಾರದ ವತಿಯಿಂದ ಕರ್ನಾಟಕ ರಾಜ್ಯ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ-1999 ರ ಕಲಂ 4(ಜಿ) ಅಡಿ ವಿನಾಯ್ತಿ ಕೋರಿ ಪ್ರಸ್ತಾವನೆ.

ಉಲ್ಲೇಖ: *ಏಕ ಕಡತ ಸಂಖ್ಯೆ:KFD/HoFF/B10(STF)/2/2021-ICT.*

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಕಡತವನ್ನು ಪರಿಶೀಲಿಸಲಾಗಿದೆ. ಅರಣ್ಯ ಇಲಾಖೆಯ ಮಾಹಿತಿ ಸಂವಹನ ತಂತ್ರಜ್ಞಾನ ಘಟಕದಲ್ಲಿ ಕಾರ್ಯನಿರ್ವಹಿಸಲು ಅವಶ್ಯಕವಿರುವ 10 ಐ.ಟಿ. ಸಮಾಲೋಚಕರ ಸೇವೆಯನ್ನು ಒಂದು ವರ್ಷದ ಅವಧಿಗೆ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಲಾಗಿರುವ ಅಧಿಸೂಚನೆ ಸಂಖ್ಯೆ: ಆಇ 262 ವೆಚ್ಚ-12/2021, ದಿನಾಂಕ:04.05.2021ರ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

12/5/21

**(ಹೆಚ್.ಎಸ್.ಭಾಗ್ಯಲಕ್ಷ್ಮಿ)**
ಸರ್ಕಾರದ ಉಪ ಕಾರ್ಯದರ್ಶಿ,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

12/5

**ಪ್ರತಿ ಸೂಕ್ತ ಕ್ರಮಕ್ಕಾಗಿ:**
ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಐಸಿಟಿ), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.